# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 335 (447) |
| ಸದಸ್ಯರ ಹೆಸರು | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 10-07-2023 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು ಹಾಗೂ ಇವರಿಗೆ ವೇತನವನ್ನು ಯಾವ ರೀತಿ ನೀಡಲಾಗುತ್ತಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ 2022-23ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ: 10252.<br>ಇವರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರನ್ವಯ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಮಾಹೆಯಾನ ಈ ಕೆಳಕಂಡಂತೆ ಗೌರವಧನವನ್ನು ಪಾವತಿಸಲಾಗುತ್ತಿದೆ.<br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/- (ಮೂವತ್ತೆರಡು ಸಾವಿರ ಮಾತ್ರ)<br>ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/- (ಮೂವತ್ತು ಸಾವಿರ ಮಾತ್ರ)<br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/- (ಇಪ್ಪತ್ತೆಂಟು ಸಾವಿರ ಮಾತ್ರ)<br>ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- (ಇಪ್ಪತ್ತಾರು ಸಾವಿರ ಮಾತ್ರ) |
| ಆ) | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ಕಾರ್ಯಭಾರವು ಹೆಚ್ಚಾಗಿದ್ದು, ಮತ್ತು ಅವರಿಗೆ ಈಗ ನೀಡುತ್ತಿರುವ ವೇತನವು ಕಡಿಮೆ ಇರುವುದರಿಂದ ಈ ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರ ವನ್ನು ಕಡಿಮೆ ಮಾಡಿ ವೇತನವನ್ನು ಹೆಚ್ಚಳ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ? | ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18.12.2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.<br>ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಉಳಿಕೆ ಕಾರ್ಯಭಾರವನ್ನು ಅತಿಥಿ ಉಪನ್ಯಾಸಕರಿಗೆ ಗರಿಷ್ಠ 8/10 ಗಂಟೆಗಳಂತೆ ನಿಗಧಿಪಡಿಸಲಾಗಿತ್ತು.<br>2020-21 ನೇ ಸಾಲಿನ ವರೆವಿಗೂ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ರೂ.11,000/-ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.<br>ದಿನಾಂಕ:14-01-2022 ಹಾಗೂ 24-01-2022 ರ ಸರ್ಕಾರಿ ಆದೇಶದ ಮೂಲಕ 'ಅ' ಪ್ರಶ್ನೆಗೆ ಒದಗಿಸಿರುವ ಉತ್ತರದಲ್ಲಿರುವಂತೆ ಗೌರವಧನವನ್ನು ಹೆಚ್ಚಿಸಲಾಗಿದೆ. |

ಇಡಿ 150 ಡಿಸಿಇ 2023

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು